ಇ) ರಾಜಧನ ರೂಪದಲ್ಲಿ ಸರ್ಕಾರಕ್ಕೆ ಸಂದಾಯವಾದ ವಿವರ ಕೆಳಕಂಡಂತಿದೆ.

1988	1989	1990	1991
209.37	487.34	332.44	521.50

ರಾಜ್ಯದ ಗ್ರಾಮಾಂತರ ಪ್ರದೇಶಗಳಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ಮತ್ತು ಆರೋಗ್ಯ ಘಟಕಗಳ ಸ್ಥಾಪನೆ

301 (585) ಶ್ರೀ ಸಾದತ್ ಅಲಿ ಖಾನ್ (ಚನ್ನಪಟ್ಟಣ):- ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ;

ಅ) ರಾಜ್ಯದ ಗ್ರಾಮಾಂತರ ಪ್ರದೇಶದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ, ಪ್ರಾಥಮಿಕ ಆರೋಗ್ಯ ಘಟಕಗಳನ್ನು ಪ್ರಾರಂಭಿಸುವ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಗ್ರಾಮಂತರ ಪ್ರದೇಶಗಳಲ್ಲಿ ಹೊಸ ಪ್ರಾಥಮಿಕ ಆರೋಗ್ಯ ಕೇಂದ್ರ ಮತ್ತು ಪ್ರಾಥಮಿಕ ಆರೋಗ್ಯ ಘಟಕಗಳನ್ನು ಮಂಜೂರು ಮಾಡುವ ಬಗ್ಗೆ ಸರ್ಕಾರದಲ್ಲಿರುವ ಯೋಜನೆಗಳೇನು?

ಇ) 1991-92ನೇ ಸಾಲಿನಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲೆಗೆ ಪ್ರಾಥಮಿಕ ಆರೋಗ್ಯ ಕೇಂದ್ರ ಮತ್ತು ಪ್ರಾಥಮಿಕ ಆರೋಗ್ಯ ಘಟಕಗಳನ್ನು ಪ್ರಾರಂಭಿಸುವ ಬಗ್ಗೆ ಪ್ರಸ್ತಾವನೆ ಇದೆಯೇ?

ಈ) ಹಾಗಿದ್ದಲ್ಲಿ ತಾಲ್ಲೂಕುವಾರು ವಿವರ ನೀಡುವುದು?

ಉ) ಗಿರಿಜನ ಹಾಗೂ ಪರಿಶಿಷ್ಟ ಜಾತಿಗೆ ಸೇರಿದ ಜನರು ಹೆಚ್ಚು ವಾಸಿಸುವ ಪ್ರದೇಶಗಳಲ್ಲಿ ಆಸ್ಪತ್ರೆಗಳನ್ನು ಮಂಜೂರು ಮಾಡಲು ಪ್ರತ್ಯೇಕವಾದ ಯೋಜನೆ ಇದೆಯೇ?

ಶ್ರೀ ಜಿ. ಪುಟ್ಟಸ್ವಾಮಿಗೌಡ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):-

ಅ) ಬಂದಿದೆ.

ಆ) ಹಾಲಿ ನಿಯಮದ ಪ್ರಕಾರ, ಬಯಲು ಸೀಮೆಗೆ 30,000 ಜನಸಂಖ್ಯೆ ಮತ್ತು ಗುಡ್ಡಗಾಡು ಪ್ರದೇಶಗಳಿಗೆ 20,000 ಜನಸಂಖ್ಯೆಗೆ ಒಂದು ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಮಂಜೂರು ಮಾಡಲಾಗುವುದು. 1-4-1987ರಿಂದ ಪ್ರಾಥಮಿಕ ಆರೋಗ್ಯ ಘಟಕಗಳನ್ನು ಮಂಜೂರು ಮಾಡುವುದನ್ನು ರದ್ದುಗೊಳಿಸಲಾಗಿದೆ.

ಇ) ಹೌದು.

ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಮಾತ್ರ.

ಈ) ಈ ಕೆಳಕಂಡ ಸ್ಥಳಗಳಿಗೆ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಮಂಜೂರು ಮಾಡಿದೆ.

1. ಹೊಸಕೋಟೆ ತಾಲ್ಲೂಕು ಖಾಜಿ ಹೊಸಹಳ್ಳಿ.
2. ಕನಕಪುರ ತಾಲ್ಲೂಕು ಗೋದೂರು.

ಉ) ಇಲ್ಲ.

Leasing of Granite Quarries

303 (513) Sri Basavaraja Rayareddi (Yelburga):- Will the Minister of State for Mines and Geology be pleased to state;

a) The no. of granite quarry leases granted by Government during the years 1989-90, 1990-91 and 1991-92 (names of the Companies and persons be furnished).